Bruhat Bengaluru Mahanagara Palike

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್, ಬೆಂಗಳೂರು-86,

# ದಿನಾಂಕ:-17-09-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ಹಾಗು ಹೊಸ ವಾರ್ಡ್ ಸಂಖ್ಯೆ:51ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/50/2022-23 ದಿನಾಂಕ:14-09-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ಕೇಶವ ಮೂರ್ತಿ | ಸಹಾಯಕ ನಿರ್ದೇಶಕರು ನಗರ ಯೋಜನೆ, ಬಿ.ಬಿ.ಎಂ.ಪಿ |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರರು, ವಾರ್ಡ್-67 |
| 3. | ಶ್ರೀ. ಉದಯ ಶಂಕರ್ | 1ನೇ 'ಆರ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. |
| 4. | ಶ್ರೀಮತಿ. ಗೀತಾ ಕೇನಾಲ್ | ವಾರ್ಡ್ ಸಮಿತಿ ಸದಸ್ಯರು. |
| 5. | ಶ್ರೀ. ಆಕಾಶ್ | ವಾರ್ಡ್ ಸಮಿತಿ ಸದಸ್ಯರು. |
| 6. | ಶ್ರೀ. ಹೊನ್ನಪ್ಪ | ವಾರ್ಡ್ ಸಮಿತಿ ಸದಸ್ಯರು. |
| 7. | ಶ್ರೀ. ಗಂಗಹನುಮಯ್ಯ | ವಾರ್ಡ್ ಸಮಿತಿ ಸದಸ್ಯರು. |
| 8. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್-67. |
| 9. | ಶ್ರೀ. ದಿಲೀಪ್ | ವಾರ್ಡ್ ಮಾರ್ಷಲ್, ವಾರ್ಡ್ -67. |
| 10. | ಶ್ರೀ. ಲೋಕೇಶ್ | ಬೀದಿ ನಾಯಿಗಳ ನಿರ್ವಹಣೆ. |
| 11. | ಶ್ರೀ. ಗಿರೀಶ್. ಬಿ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲೂ-1. |
| 12. | ಶ್ರೀ. ಮಲ್ಲಯ್ಯ | ಅರಣ್ಯ ಇಲಾಖೆ ಸಿಬ್ಬಂದಿ. |
| 13. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಖೆ, ಮೇಸ್ತ್ರೀ. |
| 14. | ಶ್ರೀ. ಶ್ರೀನಿವಾಸ್ ಎನ್ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲೂ-2. |
| 15. | ಶ್ರೀ. ಮಂಜು | ಸಹಾಯಕ ಪೋಲೀಸ್ ಇನ್ಸ್‌ಪೆಕ್ಟರ್, ರಾಜಾಜಿನಗರ ಸಂಚಾರಿ ಪೋಲೀಸ್ ಠಾಣೆ. |
| 16. | ಶ್ರೀ. ಶಿವಕುಮಾರ್ | ಸಹಾಯಕ ಪೋಲೀಸ್ ಇನ್ಸ್‌ಪೆಕ್ಟರ್, ಮಹಾಲಕ್ಷೀಲೇಔಟ್ ಪೋಲೀಸ್ ಠಾಣೆ. |
| 17. | ಶ್ರೀ. ದೇವರಾಜ | ಪೋಲಿಸ್ ಪಿ.ಸಿ, ಸುಬ್ರಮಣ್ಯನಗರ ಪೋಲೀಸ್ ಠಾಣೆ. |



ಪು.ತಿ.ನೋ.

17/9

Scanned by CamScanner

| | | |
|---|---|---|
| 18. | ಶ್ರೀ. ಮಂಜುನಾಥ್ | ಬೀದಿ ದೀಪ ನಿರ್ವಹಣೆ ಗುತ್ತಿಗೆದಾರರು, ವಾರ್ಡ್- |
| 19. | ಸಹಾಯಕ ಅಭಿಯಂತರರು, ಬೋರ್‌ವೆಲ್ ನಿರ್ವಹಣೆ. | ಗೈರು ಹಾಜರಿ. |
| 20. | ಕಿರಿಯ ಆರೋಗ್ಯ ಪರೀವಿಕ್ಷಕರು. | ಗೈರು ಹಾಜರಿ. |
| 21. | ಮಲ್ಲೇಶ್ವರಂ ಸಂಚಾರಿ ಪೊಲೀಸ್ ಠಾಣೆ. | ಗೈರು ಹಾಜರಿ. |
| 22. | ಸಹಾಯಕ ಅಭಿಯಂತರರು, ಬೆಸ್ಕಾಂ ಎನ್-1 ಉಪವಿಭಾಗ | ಗೈರು ಹಾಜರಿ. |
| 23. | ಕಂದಾಯ ಪರೀವಿಕ್ಷಕರು | ಗೈರು ಹಾಜರಿ. |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಸೆಪ್ಟೆಂಬರ್ ಮಾಹೆಯ ದಿ: 17/09/2022 ರಂದು ಬೆಳ್ಳಿಗೆ 9:30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

**<u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:</u>**

| | |
|---|---|
| ಶ್ರೀ. ಉದಯ ಶಂಕರ್ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 1ನೇ ಬ್ಲಾಕ್ ರಾಜಾಜಿನಗರದ ಆರ್ ಬ್ಲಾಕ್‌ನ ಮಂಜುನಾಥ ಸ್ವಾಮಿ ದೇವಾಲಯದ ಹತ್ತಿರ ಪಾರ್ಕಿಂಗ್ ಸಮಸ್ಯೆ ಹೆಚ್ಚಾಗಿದ್ದು, ಅಲ್ಲಿ ದೇವಾಲಯಕ್ಕೆ ಬರುವ ಬಕ್ತಾದಿಗಳಿಗೆ ಸಮಸ್ಯೆಯಾಗುತ್ತಿದೆ ಎಂದು ಸಭೆಯಲ್ಲಿ ಪ್ರಸ್ಥಾಪಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ 1ನೇ ಬ್ಲಾಕ್ ರಾಜಾಜಿನಗರದ 'ಆರ್' ಬ್ಲಾಕ್‌ನ ಮಂಜುನಾಥ ಸ್ವಾಮಿ ದೇವಾಲಯದ ಹತ್ತಿರ ಪಾರ್ಕಿಂಗ್ ಸಮಸ್ಯೆ ಬಗ್ಗೆ ಮಲ್ಲೇಶ್ವರಂ ಸಂಚಾರಿ ಪೋಲೀಸ್ ಕ್ರಮವಹಿಸಲು ತಿಳಿಸಿದರು. |
| ಶ್ರೀ. ಗೀತಾ ಕೇನಾಲ್ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 1ನೇ ಬ್ಲಾಕ್ ರಾಜಾಜಿನಗರದ ಉದಯಕುಮಾರ್ ಉದ್ಯಾನವನದ ಹತ್ತಿರ 5 ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಎಂದು ಸಭೆಯಲ್ಲಿ ಪ್ರಸ್ಥಾಪಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ 1ನೇ ಬ್ಲಾಕ್ ರಾಜಾಜಿನಗರದ ಬೀದಿ ದೀಪಗಳ ದೂರನ್ನು ಸಭೆಯಲ್ಲಿ ಹಾಜರಿದ್ದ ಬೀದಿ ದೀಪ ನಿರ್ವಹಣೆ ಗುತ್ತಿಗೆದಾರರಿಗೆ ತುರ್ತಾಗಿ ಸರಿಪಡಿಸಲು ಸೂಚಿಸಿದರು. |
| ಶ್ರೀ. ಮಂಜುನಾಥ್ ಬೀದಿ ದೀಪ ನಿರ್ವಹಣೆ ಗುತ್ತಿಗೆದಾರರು, ವಾರ್ಡ್-67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮವಹಿಸುವುದಾಗಿ ತಿಳಿಸಿದರು. |
| ಶ್ರೀ. ಗಂಗಹನುಮಯ್ಯ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನಲ್ಲಿ ಹಲವು ಕಡೆ ರಸ್ತೆ ಗುಂಡಿಗಳು ಇದ್ದು ಅವುಗಳಿಗೆ ಪ್ಯಾಚ್‌ವರ್ಕ್ ಮಾಡಿಸಬೇಕು ಎಂದು ಸಭೆಯಲ್ಲಿ ಪ್ರಸ್ಥಾಪಿಸಿದರು. |



Sd/- 17/9

ಮು.ತಿ.ನೋ.

Scanned by CamScanner

| | |
|---|---|
| ಶ್ರೀ. ಹೊನ್ನಪ್ಪ, ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ನಾಗಮರ ಮುಖ್ಯರಸ್ತೆ ಹಾಗು ಹಲವಾರು ಕಡೆ ರಸ್ತೆ ಗುಂಡಿಗಳು ಇದ್ದು ಅವುಗಳಿಗೆ ಪ್ಯಾಚ್‌ವರ್ಕ್ ಮಾಡಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ರಸ್ತೆ ಗುಂಡಿಗಳನ್ನು 3 ದಿನಗಳೊಳಗೆ ಮುಚ್ಚಿ ಪ್ಯಾಚ್‌ವರ್ಕ್ ಮಾಡಿಸಲು ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು,ವಾರ್ಡ–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮವಹಿಸುವುದಾಗಿ ತಿಳಿಸಿದರು. |
| ಶ್ರೀ. ಗಂಗಹನುಮಯ್ಯ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 12ನೇ ಅಡ್ಡರಸ್ತೆಯಲ್ಲಿ ಕಲ್ವರ್ಟ್‌ಗಳ ಕಾಮಗಾರಿಯನ್ನು ಶೀಘ್ರವಾಗಿ ಮುಗಿಸಲು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ 12ನೇ ಅಡ್ಡರಸ್ತೆಯಲ್ಲಿ ಕಲ್ವರ್ಟ್‌ಗಳನ್ನು ಬೃಹತ್ ನೀರುಗಾಲುವೆರವರಿಂದ ಕಾಮಗಾರಿ ನಿರ್ವಹಿಸುತ್ತಿದ್ದು ಸದರಿಯವರಿಗೆ ಶೀಘ್ರವಾಗಿ ಕಾಮಗಾರಿ ಮುಗಿಸಲು ತಿಳಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ಭೋವಿಪಾಳ್ಯದ 10ನೇ ಅಡ್ಡರಸ್ತೆಯಲ್ಲಿ ಮನೆಗಳ ಮೇಲೆ ಭಾಗಿರುವ ಮರವನ್ನು ತೆರವುಗೋಳಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಮಲ್ಲಯ್ಯ ಅರಣ್ಯ ಇಲಾಖೆ ಸಿಬ್ಬಂದಿ. | ವಾರ್ಡ್‌ನ ಭೋವಿಪಾಳ್ಯದ 10ನೇ ಅಡ್ಡರಸ್ತೆಯಲ್ಲಿ ಮನೆಗಳ ಮೇಲೆ ಭಾಗಿರುವ ಮರವನ್ನು ತೆರವುಗೋಳಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಮಂಜು ಸಹಾಯಕ ಪೋಲೀಸ್ ಇನ್ಸ್‌ಪೆಕ್ಟರ್, ರಾಜಾಜಿನಗರ ಸಂಚಾರಿ ಪೋಲೀಸ್ ಠಾಣೆ. | ವಾರ್ಡ್‌ನ ಪಶ್ಚಿಮ ಕಾರ್ಡ್ ರಸ್ತೆಯಲ್ಲಿ ಪೈ ಶೋರೊಂ ಹತ್ತಿರ ಮೇಟಲುಗಳನ್ನು ಮುಚ್ಚಬೇಕು ವಾಹನಗಳು ಬೀಳುವ ಸಂಭವವಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ಸಹಾಯಕ ಪೋಲೀಸ್ ಇನ್ಸ್‌ಪೆಕ್ಟರ್‌ರವರ ದೂರಿನಂತೆ ಸ್ಥಳ ಪರಿಶೀಲಿಸಿ ಕ್ರಮವಹಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್–67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು

**ಪ್ರತಿಯನ್ನು**

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.

ಪು.ತಿ.ನೋ.



1/7/19

Scanned by CamScanner

3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

(ಸಹಿ) 12/9/22
ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

(ಸಹಿ) 12/9/22
ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮು.ತ.ನೋ.



Scanned by CamScanner